ಸರಳೀಕರಿಸಿದ್ದು, ಯೋಜನಾ ಅನುಷ್ಠಾನವು ಪ್ರಗತಿಯಲ್ಲಿದೆ. ಆದುದರಿಂದ ಅನುದಾನವನ್ನು ಸಂಪೂರ್ಣವಾಗಿ ಉಪಯೋಗಿಸಲಾಗುವುದು. ಆದ್ದರಿಂದ ಕೇಂದ್ರ ಸರ್ಕಾರಕ್ಕೆ ಹಿಂದಿರುಗಿಸುವ ಪ್ರಮೇಯವೇ ಬರುವುದಿಲ್ಲ.

5) ಇಲ್ಲ.

ಉತ್ತರಹಳ್ಳಿ ಕ್ಷೇತ್ರದ ಅಂಗನವಾಡಿ ಕೇಂದ್ರಗಳು

673(871) ಶ್ರೀ ಅಶೋಕ್ ಆರ್. (ಉತ್ತರಹಳ್ಳಿ) : ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಉತ್ತರಹಳ್ಳಿ ವಿಧಾನ ಸಭಾ ಕ್ಷೇತ್ರದ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು? ಈ ಕೇಂದ್ರಗಳೆಲ್ಲ ಸ್ವಂತ ಕಟ್ಟಡ ಹೊಂದಿವೆಯೇ? (ವಿವರ ನೀಡಿ)

ಆ) ಹಲವಾರು ಕೇಂದ್ರಗಳು ಸ್ವಂತ- ಕಟ್ಟಡವಿಲ್ಲದೆ ಬಾಡಿಗೆ ಕಟ್ಟಡದಲ್ಲಿಯೇ ನಡೆಸುತ್ತಿರುವುದು ಹಾಗೂ ಇದರ ಬಾಡಿಗೆಯನ್ನು ಅಂಗನವಾಡಿ ಶಿಕ್ಷಕರುಗಳೇ ತಮ್ಮ ಗೌರವಧನದ ಹಣದಲ್ಲಿ ಪಾವತಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಈ ಅಂಗನವಾಡಿ ಕೇಂದ್ರಗಳಿಗೆ ಆಹಾರ ಪದಾರ್ಥಗಳ ವಿತರಣೆ ಅಸಮರ್ಪಕವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಈ ಬಗ್ಗೆ ಸರ್ಕಾರ ಯಾವ ಕ್ರಮ ತೆಗೆದುಕೊಳ್ಳುವುದು?

ಶ್ರೀಮತಿ ಮೋಟಮ್ಮ (ಮಹಿಳಾ ಮತ್ತು ಮಕ್ಕಳ ಸಚಿವರು) :

ಅ) ಉತ್ತರಹಳ್ಳಿ ವಿಧಾನ ಸಭಾ ಕ್ಷೇತ್ರದಲ್ಲಿ 115 ಅಂಗನವಾಡಿ ಕೇಂದ್ರಗಳಿರುತ್ತವೆ.

57 ಕೇಂದ್ರಗಳಿಗೆ ಸ್ವಂತ ಕಟ್ಟಡಗಳಿರುತ್ತವೆ.

ಆ) ಇಲ್ಲ

ಇ) ಅಂಗನವಾಡಿ ಕೇಂದ್ರಗಳಿಗೆ ಆಹಾರ ಪದಾರ್ಥಗಳ ವಿತರಣೆ ಅಸಮರ್ಪಕವಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಈ) ಅನ್ವಯಿಸುವುದಿಲ್ಲ.

ಎ.ಪಿ.ಎಂ.ಸಿ.ಗಳಲ್ಲಿ ರೈತರ ಕೃಷಿ ಉತ್ಪನ್ನಗಳಿಗೆ ಮಿನಿಮಂ ಫ್ಲೋರ್ ಪ್ರೈಸ್ ನಿಗದಿ ಮಾಡುವುದು

677(1314) ಶ್ರೀ ಆತ್ಮಾನಂದ ಎಂ.ಎಸ್(ಮಂಡ್ಯ) : ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದ ಕೃಷಿ ಮಾರುಕಟ್ಟೆಗಳಲ್ಲಿ ರೈತರ ಉತ್ಪನ್ನಗಳಿಗೆ ಮಿನಿಮಮಂ ಫ್ಲೋರ್ ಪ್ರೈಸ್‌ನ್ನು ರೈತರಿಗೆ ನಷ್ಟವಾಗದಂತೆ ಹಿತರಕ್ಷಣೆ ಮಾಡುವ ದಿಸೆಯಲ್ಲಿ ನಿಗದಿಪಡಿಸಬೇಕಿರುವ ಅವಶ್ಯಕತೆಯನ್ನು ಸರ್ಕಾರ ಮನಗಂಡಿದೆಯೇ?

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕ್ರಮ ರೂಪಿಸಿದೆಯೇ?